<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **391** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | **19.02.2024** |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿರುವ ಬಿ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು;</td><td>ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿರುತ್ತದೆ.
<table>
<tr><th>ವಿವರ</th><th>ಪಡಿತರ ಚೀಟಿ ಸಂಖ್ಯೆ</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>ಅಂತ್ಯೋದಯ ಅನ್ನ ಪಡಿತರ ಚೀಟಿ</td><td>10,84,694</td><td>44,02,005</td></tr>
<tr><td>ಆದ್ಯತಾ ಪಡಿತರ ಚೀಟಿ</td><td>1,16,66,233</td><td>3,94,18,190</td></tr>
<tr><td>ಒಟ್ಟು</td><td>1,27,50,927</td><td>4,38,20,195</td></tr>
</table>
</td></tr>
<tr><td>ಆ</td><td>ಹೊಸ ಬಿ.ಪಿ.ಎಲ್ ಕಾರ್ಡ್‌ಗಳಿಗೆ ಎಷ್ಟು ಅರ್ಜಿಗಳು ಬಂದಿವೆ;</td><td rowspan="2">ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ಬಾಕಿ ಇರುವ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರನ್ವಯ ಆದೇಶಿಸಲಾಗಿರುತ್ತದೆ. ಸರ್ಕಾರದ ಆದೇಶದಂತೆ ಬಾಕಿ ಇರುವ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿಲೇವಾರಿ ಮಾಡಲು ರಾಜ್ಯದ ಎಲ್ಲಾ ಜಂಟಿ/ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿರುತ್ತದೆ. ಹೊಸ ಆದ್ಯತಾ ಪಡಿತರ ಚೀಟಿಗಳ ವಿಲೇವಾರಿ ಕಾರ್ಯ ಪ್ರಗತಿಯಲ್ಲಿರುತ್ತದೆ. ಇವರೆಗೆ 57,561 ಹಾಗೂ ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಇವರೆಗೆ 744 ಅರ್ಜಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ.</td></tr>
<tr><td>ಇ</td><td>ಹೊಸ ಬಿ.ಪಿ.ಎಲ್ ಕಾರ್ಡ್‌ಗಳನ್ನು ಯಾವ ಕಾಲಮಿತಿಯಲ್ಲಿ ವಿತರಿಸಲಾಗುವುದು;</td></tr>
</table>

<table>
<tr>
<td>ಈ</td>
<td>ಅನ್ನಭಾಗ್ಯ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು;</td>
<td>ಅನ್ನಭಾಗ್ಯ ಯೋಜನೆಯಡಿ ಫಲಾನುಭವಿಗಳ ವಿವರ ಈ ಕೆಳಕಂಡಂತೆ ಇರುತ್ತದೆ.<br>
<table>
<tr><th>ವಿವರ</th><th>ಪಡಿತರ ಚೀಟಿ ಸಂಖ್ಯೆ</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>ಅಂತ್ಯೋದಯ ಅನ್ನ ಪಡಿತರ ಚೀಟಿ</td><td>10,84,694</td><td>44,02,005</td></tr>
<tr><td>ಆದ್ಯತಾ ಪಡಿತರ ಚೀಟಿ</td><td>1,16,66,233</td><td>3,94,18,190</td></tr>
<tr><td>ಒಟ್ಟು</td><td>1,27,50,927</td><td>4,38,20,195</td></tr>
</table>
</td>
</tr>
<tr>
<td>ಉ</td>
<td>ಅನ್ನಭಾಗ್ಯ ಯೋಜನೆಯ ಅಡಿಯಲ್ಲಿ ರಾಜ್ಯ ಸರ್ಕಾರವು 5 ಕೆ.ಜಿ ಅಕ್ಕಿ ನೀಡುತ್ತಿದ್ದು ಮತ್ತು ಇನ್ನುಳಿದ 5 ಕೆ.ಜಿ ಅಕ್ಕಿಯ ಬದಲು ಹಣವನ್ನು ನೀಡುತ್ತಿದ್ದು ಅಕ್ಕಿಯ ಬದಲಾಗಿ ಹಣವನ್ನು ಫಲಾನುಭವಿಗಳಿಗೆ ಯಾವ ಕಾಲಮಿತಿಯವರೆಗೂ ವಿತರಿಸಲಾಗುವುದು;</td>
<td>ಅನ್ನಭಾಗ್ಯ ಯೋಜನೆಯಡಿ ರಾಜ್ಯ ಸರ್ಕಾರದಿಂದ ನೀಡಬೇಕಾದ ಹೆಚ್ಚುವರಿ ಆಹಾರಧಾನ್ಯಗಳು ಸಾಕಷ್ಟು ಲಭ್ಯವಾಗುವವರೆಗೆ 5 ಕೆ.ಜಿ ಹೆಚ್ಚುವರಿ ಅಕ್ಕಿಯ ಬದಲಾಗಿ ಅದಕ್ಕೆ ತತ್ಸಮಾನವಾದ ಹಣ ಅಂದರೆ ಪ್ರತಿ ಕೆ.ಜಿಗೆ ರೂ.34 ರಂತೆ 05 ಕೆ.ಜಿ ಗೆ ಒಟ್ಟು ರೂ. 170/- ಪಡಿತರ ಚೀಟಿಯ ಮುಖ್ಯಸ್ಥರಿಗೆ DBT ( Direct Benefit transfer) ಮೂಲಕ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದೆ. ಹೆಚ್ಚುವರಿ 5 ಕೆ. ಜಿ ಅಕ್ಕಿಯನ್ನು ನೀಡಲು ಸುಮಾರು 2.29 ಲಕ್ಷ ಮೆ.ಟನ್ ಅಕ್ಕಿ ಅವಶ್ಯಕವಿದ್ದು ಹೆಚ್ಚುವರಿ ಅಕ್ಕಿಯ ಲಭ್ಯವಾಗುವವರೆಗೂ ನೇರ ನಗದು ವರ್ಗಾವಣೆ ಯೋಜನೆ ಮುಂದುವರೆಯುತ್ತದೆ.</td>
</tr>
<tr>
<td>ಊ</td>
<td>ರಾಜ್ಯ ಸರ್ಕಾರದ ಅಕ್ಕಿ ಬೇಡಿಕೆಗೆ ಕೇಂದ್ರ ಸರ್ಕಾರವು ಈವರೆವಿಗೂ ಯಾವುದೇ ಕ್ರಮ ಕೈಗೊಳ್ಳದೇ ಇರುವ ಕುರಿತು ಸರ್ಕಾರದ ಮುಂದಿನ ನಿಲುವೇನು? (ವಿವರ ನೀಡುವುದು)</td>
<td>ಪ್ರತಿ ತಿಂಗಳು ಹೆಚ್ಚುವರಿ 5 ಕೆ. ಜಿ ಅಕ್ಕಿ ನೀಡಲು ಅಂದಾಜು 2.29 ಲಕ್ಷ ಮೆ.ಟನ್ ಅಕ್ಕಿ ಅವಶ್ಯವಿದ್ದು, ಹೆಚ್ಚುವರಿ ಅಕ್ಕಿಯನ್ನು ಖರೀದಿಸುವ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ.</td>
</tr>
</table>

ಆನಾಸ 50 ಡಿಆರ್‌ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು